# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸರ್ವಜ್ಞನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿಗೆ ಸಂಬಂಧಿಸಿದಂತೆ ವಾರ್ಡ್ ಸಮಿತಿಯ ಸಭೆಯನ್ನು ದಿನಾಂಕ: 06-03-2021 ರಂದು ಆಯೋಜಿಸಿದ್ದು, ಸದರಿ ವಾರ್ಡ್ ಸಮಿತಿ ಸಭೆಯ ನಡವಳಿಗಳು**

1. ಶ್ರೀ ನಾಗಪ್ಪ ಕಮತಿ (ನೋಡಲ್ ಅಧಿಕಾರಿ)
2. ಶ್ರೀ ಎಸ್. ರಾಜನ್ (ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು)
3. ಶ್ರೀ ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು,
4. ಶ್ರೀ ಶ್ರೀನಿವಾಸ್, ಕಂದಾಯ ನಿರೀಕ್ಷಕರು,
5. ಶ್ರೀ ಕ್ಯಾಪ್ಟನ್ ಸುಬ್ರಮಣಿ,
6. ಶ್ರೀ ನಂಜುಂಡಯ್ಯ, ಸಹಾಯಕ ಅಭಿಯಂತರರು, ಬಿ.ಡ.ಬ್ಲ್ಯೂ.ಎಸ್.ಎಸ್.ಬಿ ಇಲಾಖೆ
7. ಶ್ರೀಮತಿ ಶ್ರೀಲಕ್ಷ್ಮಿ, ಕಿರಿಯ ಆರೋಗ್ಯ ನಿರೀಕ್ಷಕರು,
8. ಶ್ರೀ ಮುರಳೀಧರ, ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಮುರಳೀಧರ್, ಸ್ಥಳೀಯರು ಮಾತನಾಡುತ್ತಾ,** ಕೋವಿಡ್-19 ಸೋಂಕು ಹೆಚ್ಚಾಗುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ತಪಾಸಣಾ ಕೇಂದ್ರವನ್ನು ತೆರೆದು, ವಾರ್ಡ್ ವ್ಯಾಪ್ತಿಯಲ್ಲಿರುವ ಸಾರ್ವಜನಿಕರಿಗೆ ತಪಾಸಣೆ ಕೈಗೊಳ್ಳಲು ಕ್ರಮ ವಹಿಸಲು ಸಭೆಗೆ ತಿಳಿಸಿದರು ಹಾಗೂ ವಿದ್ಯುತ್ ದೀಪಗಳನ್ನು ಹಾಕಬೇಕು, ಕಮ್ಮನಹಳ್ಳಿಯಲ್ಲಿ ಪಾದಾಚಾರಿಯ ಸಮಸ್ಯೆ ಹಾಗೂ ರಾಮಯ್ಯ ರಸ್ತೆಯಲ್ಲಿ ಬೋರ್‌ವೆಲ್ ಹಾಕಬೇಕು ಎಂದು ತಿಳಿಸಿರುತ್ತಾರೆ. ಹಾಗೂ ವಾರ್ಡಿನ ಎಲ್ಲಾ ಪಾರ್ಕ್‌ಗಳಲ್ಲಿ ಬೀದಿ ದೀಪ ಉರಿಯುತ್ತಿಲ್ಲಾ ಎಂದು ದೂರು ನೀಡಿರುತ್ತಾರೆ. ಹಾಗೂ ಕಮ್ಮನಹಳ್ಳಿ ಮುಖ್ಯರಸ್ತೆಯ ಕನಕದಾಸ ರಸ್ತೆಯಲ್ಲಿ ಶಿಲ್ಟ್ ತೆಗೆಸಬೇಕು ಮತ್ತು ರಸ್ತೆಯನ್ನು ಮಾಡಬೇಕು.

2) **ಶ್ರೀ ಕ್ಯಾಪ್ಟನ್ ಸುಬ್ರಮಣಿ, ಮಾತನಾಡುತ್ತಾ,** ಸಂಪಿಗೆ ರಸ್ತೆಯ ಮುಂಬಾಗದ ಪೂಟ್‌ಪಾತ್‌ನಲ್ಲಿ ಡೆಬ್ರೀಸ್‌ನ್ನು ಹಾಕಿರುತ್ತಾರೆ. ಕರುಮಾರಿಯಮ್ಮ ದೇವಾಸ್ಥಾನ ಹತ್ತಿರ ಬಿಡಬ್ಲ್ಯೂ.ಎಸ್.ಎಸ್.ಬಿ.ಯವರು ರಸ್ತೆಯನ್ನು ಅಗೆದು ಡೆಬ್ರೀಸ್‌ನ್ನು ಅಲ್ಲಿಯೇ ಹಾಕಿದ್ದು ಅದನ್ನು ಕೂಡಲೇ ತೆರವುಗೊಳಿಸಲು ಸಭೆಗೆ ತಿಳಿಸಿದರು. ಹಾಗೂ ವಾರ್ಡಿನ ಮ್ಯಾನ್ ಹೋಲ್‌ಗಳ ಚೇಂಬರ್ ಮುಚ್ಚಳವು ಅಗ್ಗ ಮತ್ತು ಕುಗ್ಗಾಗಿರುತ್ತದೆ. ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರುಗಳಿಗೆ ಮಾಸ್ಕ್, ಸ್ಯಾನಿಟೈಸರ್ ಹಾಗೂ ಕೈ ಗವಸುಗಳನ್ನು

ಕಡ್ಡಾಯವಾಗಿ ನೀಡಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. ಇತ್ತೀಚೆಗೆ ಕೊರೋನಾ ಸೋಂಕು ಹೆಚ್ಚಾಗುತ್ತಿದ್ದು, ವಾರ್ಡ್ ವ್ಯಾಪ್ತಿಯಲ್ಲಿ ನಿಯೋಜಿಸಿರುವ ಮಾರ್ಷಲ್ ಹಾಗೂ ಆರೋಗ್ಯ ಇಲಾಖೆಯ ಅಧಿಕಾರಿ / ನೌಕರರುಗಳಿಗೆ ಜನರಲ್ಲಿ ಜನಜಾಗೃತಿ ಮೂಡಿಸಲು ಕ್ರಮ ವಹಿಸಲು ಹಾಗೂ ಮಾಸ್ಕ್ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳದ ಜನರಿಗೆ ಸೂಕ್ತ ದಂಡ ವಿಧಿಸಲು ಕಟ್ಟು ನಿಟ್ಟಿನ ಕ್ರಮ ವಹಿಸಲು ಸಭೆಗೆ ತಿಳಿಸಿಡರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಸೂಚಿಸಿದರು.

**ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ,**

**ನೋಡೆಲ್ ಅಧಿಕಾರಿ**
**ವಾರ್ಡ್ ಸಂಖ್ಯೆ.28, ಕಮ್ಮನಹಳ್ಳಿ**

ಪ್ರತಿಯನ್ನು

1) ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ, ಬಿ.ಬಿ.ಎಂ.ಪಿ
2) ಕಾರ್ಯಪಾಲಕ ಅಭಿಯಂತರರು, ಯೋಜನೆ (ಪೂರ್ವ ವಲಯ) ಬಿ.ಬಿ.ಎಂ.ಪಿ
3) ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಪೂರ್ವ ವಲಯ) ಬಿ.ಬಿ.ಎಂ.ಪಿ
4) ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ.
5) ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ
6) ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯಗಳು.ಬಿ.ಬಿ.ಎಂ.ಪಿ
7) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಬಿ.ಬಿ.ಎಂ.ಪಿ
8) ತೋಟಗಾರಿಕಾ ಅಧೀಕ್ಷಕರು, (ಪೂರ್ವ ವಲಯ)
9) ಆರೋಗ್ಯ ವೈದ್ಯಾಧಿಕಾರಿಗಳು, (ಪೂರ್ವ ವಲಯ)
10) ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ವಿಭಾಗ
11) ಸಹಾಕಯ ಕಂದಾಯ ಅಧಿಕಾರಿ. ಮಾರುತಿ ಸೇವಾ ನಗರ ಉಪವಿಭಾಗ
12) ಕಲ್ಯಾಣಾದಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
13) ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, (ಪೂರ್ವ ವಲಯ) ಬಿ.ಬಿ.ಎಂ.ಪಿ
14) ಪೋಲಿಸ್ ಇನ್ಸ್‌ಪೆಕ್ಟರ್, ಬಾಣಸವಾಡಿ.
15) ಪೋಲಿಸ್ ಇನ್ಸ್‌ಪೆಕ್ಟರ್,(ಸಂಚಾರಿ), ಬಾಣಸವಾಡಿ.
16) ಕಛೇರಿ ಪ್ರತಿ.